ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

6

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಮಂಡಲ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 26/6/2020

# ವಿಧಾನಸೌಧಕ್ಕೆ ಇನ್ನು ಬೆಳಗ್ಗೆ ಸಾರ್ವಜನಿಕರಿಗೆ ನೋ ಎಂಟ್ರಿ

## ಮಧ್ಯಾಹ್ನ 3.30ರ ನಂತರ ಮಾತ್ರ ಪ್ರವೇಶಾವಕಾಶ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ನಗರದಲ್ಲಿ ಕೊರೋನಾ ಸೋಂಕು ತೀವ್ರ ಸ್ವರೂಪದಲ್ಲಿ ಹರಡುತ್ತಿರುವ ಹಿನ್ನೆಲೆಯಲ್ಲಿ ವಿಧಾನಸೌಧ, ವಿಕಾಸಸೌಧ ಮತ್ತು ಶಾಸಕರ ಭವನಗಳಿಗೆ ಸಾರ್ವಜನಿಕರ ಪ್ರವೇಶಕ್ಕೆ ನಿರ್ಬಂಧ ಹೇರಲಾಗಿದೆ.

ಸಚಿವರು, ಶಾಸಕರು ಮತ್ತು ಅಧಿಕಾರಿಗಳನ್ನು ಭೇಟಿ ಮಾಡಲು ವಿಧಾನಸೌಧಕ್ಕೆ ಬರುವ ಸಾರ್ವಜನಿಕರಿಗೆ ಮಧ್ಯಾಹ್ನ 3.30ರ ನಂತರ ಮಾತ್ರ ಪ್ರವೇಶಕ್ಕೆ ಅವಕಾಶವಿರುತ್ತದೆ. ಗುರುವಾರ ವಿಧಾನಸೌಧದ ಬಂದೋಬಸ್ತ್‌ನಲ್ಲಿದ್ದ ಪೊಲೀಸರಲ್ಲಿ ಕೋವಿಡ್ ಪತ್ತೆಯಾದ ಹಿನ್ನೆಲೆಯಲ್ಲಿ, ಗುರುವಾರ ವಿಧಾನಸಭೆ ಅಧ್ಯಕ್ಷರು ಮತ್ತು ವಿಧಾನ ಪರಿಷತ್ ಸಭಾಪತಿ ಅವರು ಜಂಟಿ ಅಧ್ಯಕ್ಷತೆಯಲ್ಲಿ ಸಭೆ ನಡೆಸಿ ಈ ತೀರ್ಮಾನ ಕೈಗೊಂಡಿದ್ದಾರೆ.

ವಿಧಾನಸೌಧ ಹಾಗೂ ವಿಕಾಸಸೌಧದಂತೆಯೇ ಶಾಸಕರ ಭವನಕ್ಕೂ ಸಾರ್ವಜನಿಕರಿಗೆ ಪ್ರವೇಶ ನಿರ್ಬಂಧ ವಿಧಿಸಲು



ತೀರ್ಮಾನಿಸಲಾಗಿದೆ. ಇನ್ನು ಮುಂದೆ ಶಾಸಕರ ಭವನಕ್ಕೆ ಬರುವವರು ಮುಖ್ಯದ್ವಾರದಲ್ಲಿ ಇಡಲಾದ ಪಟ್ಟಿಯಲ್ಲಿ ತಮ್ಮ ಹೆಸರು, ಫೋನ್ ನಂಬರ್, ಭೇಟಿಯ ಉದ್ದೇಶಗಳನ್ನು ಕಡ್ಡಾಯವಾಗಿ ನಮೂದಿಸಬೇಕು. ಪ್ರಾಥಮಿಕ ವೈದ್ಯಕೀಯ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಸೂಚಿಸಲಾಗಿದೆ

ಇನ್ನು ಶಾಸಕರ ಭವನಕ್ಕೆ ಶಾಸಕರು ಆಗಮಿಸಿದಾಗ ಅವರೊಂದಿಗೆ ಅವರ ಆಪ್ತ ಸಹಾಯಕ, ಕಾರು ಚಾಲಕ ಮತ್ತು ಅಂಗರಕ್ಷಕರಿಗೆ ಮಾತ್ರ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗುತ್ತದೆ.